(58)

ವಿಷಯ: 2015-16ನೇ ಸಾಲಿನಲ್ಲಿ ವಿಶೇಷ ವಸತಿ ಯೋಜನೆಯಡಿ 10 ಸಾವಿರ ಮನೆಗಳ ಗುರಿಯನ್ನು ಅನುಷ್ಠಾನಗೊಳಿಸುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ:ವಇ 33 ಹೆಚ್‌ಎಹೆಚ್ 2013, ದಿನಾಂಕ:29.09.2014.
2. 2015-16ನೇ ಸಾಲಿನ ಮಾನ್ಯ ಮುಖ್ಯ ಮಂತ್ರಿಯವರ ಆಯವ್ಯಯ ಭಾಷಣದ ಕಂಡಿಕೆ-256.
3. ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ: ಎಸ್‌ಡಿ ಆರ್‌ಜಿಆರ್‌ಹೆಚ್‌ಸಿಎಲ್ 03 ಎಸ್‌ಹೆಚ್‌ಟಿ 02 2015 ದಿನಾಂಕ:03.10.2015.

ಪ್ರಸ್ತಾವನೆ:

ಮೇಲೆ ಓದಲಾಗಿರುವ(1)ರಲ್ಲಿ ಸರ್ಕಾರದ ಆದೇಶದಲ್ಲಿ ವಿಶೇಷ ವರ್ಗದ ಫಲಾನುಭವಿಗಳನ್ನು ಗುರ್ತಿಸಲು ಮತ್ತು ಯೋಜನೆಯನ್ನು ಅನುಷ್ಠಾನಗೊಳಿಸಲು ಮಾರ್ಗಸೂಚಿಯನ್ನು ನೀಡಲಾಗಿದೆ. ಮೇಲೆ ಓದಲಾದ (2)ರಲ್ಲಿ 2015-16ನೇ ಸಾಲಿನ ಆಯವ್ಯಯದ ಕಂಡಿಕೆ-256ಲ್ಲಿ ಈ ಕೆಳಕಂಡಂತೆ ಘೋಷಣೆ ಮಾಡಿರುತ್ತಾರೆ.

> **"2015-16ನೇ ಸಾಲಿನಲ್ಲಿ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿರುವ ಒಟ್ಟು ಮನೆಗಳ ಪೈಕಿ, 3 ಲಕ್ಷ ಮನೆಗಳ ನಿರ್ಮಾಣವನ್ನು ಪೂರ್ಣಗೊಳಿಸಲಾಗುವುದು ಜೊತೆಗೆ ವಿವಿಧ ವಸತಿ ಯೋಜನೆಯಡಿ 4.80 ಲಕ್ಷ ಹೊಸ ಮನೆಗಳನ್ನು ಮಂಜೂರು ಮಾಡಲಾಗುವುದು. ಈ ಗುರಿಯ ಪೈಕಿ, 2.98ಲಕ್ಷ ಮನೆಗಳನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗಾಗಿ ಮೀಸಲಿರಿಸಲಾಗುವುದು".**

ಅದರಂತೆ ಮೇಲಿನ 2015-16ನೇ ಸಾಲಿನಲ್ಲಿ ವಿವಿಧ ವಸತಿ ಯೋಜನೆಗಳಡಿ 4.80ಲಕ್ಷ ಮನೆಗಳನ್ನು ಮಂಜೂರು ಮಾಡಲಾಗಿದ್ದು, ಈ 4.80ಲಕ್ಷ ಗುರಿಯಲ್ಲಿ ಬಸವ ವಸತಿ ಯೋಜನೆಯಡಿ 2.00ಲಕ್ಷ ಮನೆಗಳನ್ನು, ಇಂದಿರಾ ಆವಾಸ್ ಯೋಜನೆಯಡಿ 1.00ಲಕ್ಷ ಮನೆಗಳನ್ನು, ಡಾ|| ಅಂಬೇಡ್ಕರ್ ನಿವಾಸ್ ಯೋಜನೆಯಡಿ 1.50ಲಕ್ಷ ಮನೆಗಳನ್ನು ಮತ್ತು ವಾಜಪೇಯಿ ನಗರ ವಸತಿ ಯೋಜನೆಯಡಿ 20,000 ಮನೆಗಳ ನಿರ್ಮಾಣದ ಗುರಿಯನ್ನು ಮಂಜೂರು ಮಾಡಲಾಗಿದೆ. ಆದರಂತೆ, ವಿಶೇಷ ವಸತಿ ಯೋಜನೆಯಡಿ 10ಸಾವಿರ ಮನೆಗಳ ಗುರಿಯನ್ನು ಅನುಷ್ಠಾನಗೊಳಿಸಲು ಆದೇಶ ಹೊರಡಿಸುವಂತೆ ಮೇಲೆ ಓದಲಾದ (3)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ ಇವರು ಕೋರಿರುತ್ತಾರೆ. ಅದರಂತೆ, ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ:ವಇ 127 ಹೆಚ್‌ಎಹೆಚ್ 2015, ಬೆಂಗಳೂರು, ದಿನಾಂಕ:20.10.2015.**

2015-16ನೇ ಸಾಲಿನಲ್ಲಿ ವಿವಿಧ ವಸತಿ ಯೋಜನೆಗಳಡಿ 4.80ಲಕ್ಷ ಮನೆಗಳನ್ನು ಮಂಜೂರು ಮಾಡಲಾಗುವುದೆಂದು ಘೋಷಿಸಿರುವ ಹಿನ್ನೆಲೆಯಲ್ಲಿ, ಈಗಾಗಲೇ ಬಸವ ವಸತಿ ಯೋಜನೆಯಡಿ 2.00ಲಕ್ಷ ಮನೆಗಳನ್ನು, ಇಂದಿರಾ ಆವಾಸ್ ಯೋಜನೆಯಡಿ 1.00ಲಕ್ಷ ಮನೆಗಳನ್ನು, ಡಾ|| ಬಿ.ಆರ್.ಅಂಬೇಡ್ಕರ್ ನಿವಾಸ್ ಯೋಜನೆಯಡಿ 1.50ಲಕ್ಷ ಮನೆಗಳನ್ನು ಗ್ರಾಮೀಣ ಮತ್ತು ನಗರ ಪ್ರದೇಶಕ್ಕೆ ಹಾಗೂ ವಾಜಪೇಯಿ ನಗರ ವಸತಿ ಯೋಜನೆಯಡಿ 20,000 ಮನೆಗಳ ನಿರ್ಮಾಣದ ಗುರಿಯನ್ನು ಮಂಜೂರು ಮಾಡಲಾಗಿದೆ. ಅದರಂತೆ, ವಿಶೇಷ ವಸತಿ ಯೋಜನೆಯಡಿ 10,000 ಮನೆಗಳ ನಿರ್ಮಾಣದ ಗುರಿಯನ್ನು ಮಂಜೂರು ಮಾಡಿದೆ.

ವಿಶೇಷ ವಸತಿ ಯೋಜನೆಯಡಿ 10,000 ಮನೆಗಳ ನಿರ್ಮಾಣಕ್ಕೆ ತಗಲುವ ವೆಚ್ಚವನ್ನು 2015-16ನೇ ಸಾಲಿನ ಆಯವ್ಯಯದಲ್ಲಿ ವಸತಿ ಇಲಾಖೆಯ ವಿವಿಧ ವಸತಿ ಯೋಜನೆಗಳ ಅನುಷ್ಠಾನಕ್ಕೆ ನೀಡಲಾಗಿರುವ ಈ ಯೋಜನೆಯ ಲೆಕ್ಕ ಶೀರ್ಷಿಕೆಯಲ್ಲಿ ಒದಗಿಸಲಾಗುವ ಅನುದಾನದಿಂದ ಭರಿಸತಕ್ಕದ್ದು.

..2

(87)



ಈ ಆದೇಶವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮವು ಸೂಕ್ತ ಸುತ್ತೋಲೆಯನ್ನು ಹೊರಡಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ

(ಸಮೀರ್ ಮಡಿಮನ್)
ಸರ್ಕಾರದ ಅಧೀನ ಕಾರ್ಯದರ್ಶಿ-2,
ವಸತಿ ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ) (ಆಡಿಟ್ 1 ಮತ್ತು 2) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು. ಕಂದಾಯ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಯೋಜನಾ ಇಲಾಖೆ.
3. ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ.
4. ಎಲ್ಲಾ ಜಿಲ್ಲಾಧಿಕಾರಿಗಳು, ಎಲ್ಲಾ ವಿಭಾಗಾಧಿಕಾರಿಗಳು, ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳು, ಎಲ್ಲಾ ತಾಲ್ಲೂಕುಗಳ ತಹಶೀಲ್ದಾರ್‌ರವರು, ಎಲ್ಲಾ ಮುಖ್ಯಾಧಿಕಾರಿಗಳು, ಪಟ್ಟಣ ಪಂಚಾಯ್ತಿ ಹಾಗೂ ಆಯುಕ್ತರು, ನಗರಸಭೆ ರವರಿಗೆ ಮತ್ತು ಇತರೆ ಸಂಬಂಧಪಟ್ಟ ಅಧಿಕಾರಿಗಳಿಗೆ ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತರವರ ಮುಖಾಂತರ.
5. ಮಾನ್ಯ ವಸತಿ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-9), ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ-ಗ್ರೇಡ್-1, ವಸತಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
8. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವಸತಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
9. ಶಾಖಾ ರಕ್ಷಾಕಡತ/ಹೆಚ್ಚುವರಿ ಪ್ರತಿ.